ಇ) *ಆರ್ಥಿಕ ಮುಗ್ಗಟ್ಟಿನಿಂದ ಬೈಲಹೊಂಗಲದಲ್ಲಿರುವ ಸಮಾಧಿ ಅಭಿವೃದ್ಧಿ ಕುಂಠಿತಗೊಂಡ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ?*

ಶ್ರೀ ಜಿ. ಪುಟ್ಟಸ್ವಾಮಿಗೌಡ (ಕೃಷಿ ಮತ್ತು ತೋಟಗಾರಿಕೆ ಇಲಾಖೆ ಸಚಿವರು):

ಅ) ಕಿತ್ತೂರು ರಾಣಿ ಚನ್ನಮ್ಮನ ಸಮಾಧಿಯ ಸುತ್ತ ಅಲಂಕಾರಿಕ ತೋಟವನ್ನು ಬೆಳೆಸುವ ಕಾರ್ಯಕ್ರಮವಿದೆ. ಇದಕ್ಕಾಗಿ ಸಿವಿಲ್ ಕಾಮಗಾರಿಯನ್ನು ಲೋಕೋಪಯೋಗಿ ಇಲಾಖೆಯು ಮಾಡುತ್ತಿದ್ದು. ಇದು ಮುಗಿದ ನಂತರ ಅಲಂಕಾರಿಕ ತೋಟವನ್ನು ಬೆಳೆಸಲಾಗುವುದು. ಸಧ್ಯದಲ್ಲಿ ಕೆಲವು ಅಲಂಕಾರಿಕ ಗಿಡಗಳನ್ನು ಬೆಳೆಸಲಾಗುತ್ತಿದೆ.

ಆ) ಬೆಳಗಾಂ ಜಿಲ್ಲಾ ಪರಿಷತ್ತಿನವರು ಇದಕ್ಕೆ ಹಣ ಒದಗಿಸಬೇಕಾಗಿರುತ್ತದೆ.

ಇ) ಮೊದಲು ಸಿವಿಲ್ ಕಾಮಗಾರಿಗಳು ಮುಗಿಯಬೇಕಾಗಿರುತ್ತದೆ. ಜಿಲ್ಲಾ ಪರಿಷತ್ ಇದಕ್ಕೆ ಹಣ ಒದಗಿಸುತ್ತಿದೆ.

ದಾವಣಗೆರೆ ನಗರಕ್ಕೆ ಕುಡಿಯುವ ನೀರಿನ ಯೋಜನೆ

1584 - ಶ್ರೀ ಯಜಮಾನ್ ಮೋತಿ ವೀರಣ್ಣ (ದಾವಣಗೆರೆ) : ಮಾನ್ಯ ವಸತಿ ಮತ್ತು ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ದಾವಣಗೆರೆ ನಗರಕ್ಕೆ ನೀರು ಸರಬರಾಜು ಮಾಡಲು ತಯಾರಿಸಿರುವ 2ನೇ ಹಂತದ ನೀರು ಪೂರೈಕೆ ಯೋಜನೆಯು ಸರ್ಕಾರದ ಮುಂದಿದೆಯೇ?*

ಆ) *ನಗರದ ತಾತ್ಕಾಲಿಕ ಅಗತ್ಯಗಳ ಪೂರೈಕೆಗಾಗಿ ಅಲ್ಲಿಗೆ 50 ಕೊಳವೆ ಬಾವಿ ತೋಡಿಸಬೇಕೆಂದು ಬೇಡಿಕೆಯು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಇ) *ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರದವರು ಕೈಗೊಂಡ ಕ್ರಮಗಳೇನು?*

ಈ) *ನಗರಕ್ಕೆ ಅವಶ್ಯವಿರುವ ಕಡೆಗಳಿಗೆ ಒಳಚರಂಡಿ ವ್ಯವಸ್ಥೆ ಸುಲಭ ಶೌಚಾಲಯ ರಸ್ತೆಗಳ ಅಭಿವೃದ್ಧಿ ಇತ್ಯಾದಿಗಳಿಗಾಗಿ ನಗರಸಭೆಗೆ ಹೆಚ್ಚುವರಿ ಧನಸಹಾಯ ನೀಡಬೇಕೆಂಬ ವಿಷಯ ಸರ್ಕಾರದ ಪರಿಶೀಲನೆಯಲ್ಲಿ ಇದೆಯೇ?*

ಉ) *ಹಾಗಿದ್ದಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು?*

ಶ್ರೀ ಕೆ.ಜೆ. ಜಾರ್ಜ್ (ವಸತಿ ಮತ್ತು ನಗರಾಭಿವೃದ್ಧಿ ಸಚಿವರು):

ಅ) ಹೌದು.

ಆ) ಹೌದು.

ಇ) ಚಿತ್ರದುರ್ಗ ಜಿಲ್ಲಾಧಿಕಾರಿಗಳಿಗೆ-ರೂ.10.00ಲಕ್ಷ ಹಣ ಬಿಡುಗಡೆ ಮಾಡಲಾಗಿದೆ.

ಈ) ಇದೆ.

ಉ) ಹಣ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಬೆಳೆ ಪರಿಹಾರ ಮತ್ತು ಭೂಸ್ವಾಧೀನ ಪರಿಹಾರದ ಬಗ್ಗೆ

1686 - ಶ್ರೀ. ಆರ್. ನಾರಾಯಣ (ಬೆಳ್ಳಾವಿ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಹೇಮಾವತಿ ಜಲಾಶಯ ಯೋಜನೆಯಲ್ಲಿ ತುಮಕೂರು ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಕಾಲುವೆಯ ಕೆಲಸಕ್ಕೆ ವಶಪಡಿಸಿಕೊಂಡಿರುವ ಭೂಮಿಯ ಮಾಲೀಕರಿಗೆ ಬೆಳೆ ಪರಿಹಾರ ಮತ್ತು ಭೂಸ್ವಾಧೀನ ಪರಿಹಾರ ಕೊಡುವ ಬಗ್ಗೆ ಆಗಿರುವ ವಿಳಂಬ ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ ಇದನ್ನು ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?*

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಕಂದಾಯ ಸಚಿವರು):

ಅ) ಬೆಳೆ ಪರಿಹಾರ ಪಾವತಿ ಮಾಡುವ ಬಗ್ಗೆ ಲೋಕೋಪಯೋಗಿ ಇಲಾಖೆಯವರಿಗೆ ಸಂಬಂಧಿಸಿರುವುದರಿಂದ ವಿಳಂಬದ ಬಗ್ಗೆ ಇಲಾಖೆಯ ಗಮನಕ್ಕೆ ಬಂದಿರುವುದಿಲ್ಲ. ಜಮೀನಿನ ಪರಿಹಾರದ ಬಗ್ಗೆ ಭೂಸ್ವಾಧೀನ ನಡವಳಿಕೆ ಪೂರ್ಣಗೊಂಡ ನಂತರ ಪರಿಹಾರ ನೀಡಲಾಗುತ್ತಿದ್ದು, ಈಗಾಗಲೇ 43 ಪ್ರಕರಣಗಳಲ್ಲಿ ರೂ.1,71,44,795.00ಗಳನ್ನು ಪರಿಹಾರ ನೀಡಲಾಗಿದೆ. ಆದ್ದರಿಂದ ಜಮೀನಿನ ಪರಿಹಾರ ನೀಡುವಲ್ಲಿ ಯಾವುದೇ ವಿಳಂಬವಾಗಿಲ್ಲ.

ಆ) ಉದ್ಭವಿಸುವುದಿಲ್ಲ.

ಹಾಸನ ಜಿಲ್ಲೆಯ ಆಲೂಗಡ್ಡೆ ಬೆಳೆಗಾರರ ಹಿತರಕ್ಷಣೆ

1706 - ಶ್ರೀ ಎ.ಟಿ. ರಾಮಸ್ವಾಮಿ (ಅರಕಲಗೂಡು) : ಮಾನ್ಯ ಕೃಷಿ ಮತ್ತು ತೋಟಗಾರಿಕೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಾಸನ ಜಿಲ್ಲೆಯಲ್ಲಿ ಆಲೂಗಡ್ಡೆ ಬೆಳೆಯನ್ನು ಪ್ರಮುಖವಾಗಿ ಬೆಳೆಯುವ ಬೆಳೆಗಾರರ ಹಿತರಕ್ಷಣೆಗಾಗಿ ಹಾಸನ ಜಿಲ್ಲೆಯ ವಿವಿಧ ಪ್ರದೇಶಗಳಲ್ಲಿ ಶೀತಲ ಗೃಹ ನಿರ್ಮಾಣ ಮಾಡುವ ಉದ್ದೇಶವೇನಾದರೂ ಸರ್ಕಾರಕ್ಕಿದೆಯೇ?

ಆ) ಹಾಗಿದ್ದಲ್ಲಿ ಶೀತಲ ಗೃಹ ನಿರ್ಮಾಣ ಮಾಡಲು ಉದ್ದೇಶಿಸಿರುವ ಸ್ಥಳಗಳು ಯಾವುವು ಮತ್ತು ಅವುಗಳನ್ನು ಯಾವಾಗ ಮಾಡಲಾಗುತ್ತದೆ?

ಇ) ಆಲೂಗಡ್ಡೆ ಬೆಳೆ ಧಾರಣೆಯ ಕುಸಿತವನ್ನು ತಡೆಗಟ್ಟಲು ಸರ್ಕಾರದವರು ಕ್ರಮವೇನಾದರೂ ಕೈಗೊಳ್ಳುವರೇ?

ಶ್ರೀ ಜೆ. ಪುಟ್ಟಸ್ವಾಮಿಗೌಡ (ಕೃಷಿ ಮತ್ತು ತೋಟಗಾರಿಕೆ ಸಚಿವರು):

ಅ) ಇಲ್ಲ. ಆದರೆ ಹಾಸನ ನಗರದಲ್ಲಿ ಈಗಾಗಲೇ 120 ಮೆಟ್ರಿಕ್ ಟನ್ ಸಾಮರ್ಥ್ಯವುಳ್ಳ ಒಂದು ಶೀತಲಗೃಹ ಕಾರ್ಯಾಚರಣೆಯಲ್ಲಿದೆ. ಇದನ್ನು ಆಲೂಗಡ್ಡೆ ಶೇಖರಣೆಗಾಗಿ ಉಪಯೋಗಿಸಲಾಗುತ್ತಿದೆ.

ಆ) ಉದ್ಭವಿಸುವುದಿಲ್ಲ.

ಇ) ಆಲೂಗಡ್ಡೆ ಉತ್ಪನ್ನದ ಬೆಲೆಯು ಬಹಳಷ್ಟು ಕುಸಿದಾಗ ಆಲೂಗಡ್ಡೆಯನ್ನು ಕೊಳ್ಳಲು ಕರ್ನಾಟಕ ರಾಜ್ಯ ಸಹಕಾರಿ ಮಾರಾಟ ಮಹಾ ಮಂಡಲದವರಿಗೆ ಸೂಚನೆ ನೀಡಲಾಗಿದೆ.

ಬಾದಾಮಿ ನಗರದ ಮಕಾನದಲ್ಲಿ ಕುಡಿಯುವ ನೀರಿನ ತೊಂದರೆಗಳ ಬಗ್ಗೆ

1733 - ಶ್ರೀ ಎಂ.ಕೆ. ಪಟ್ಟಣ ಶೆಟ್ಟಿ (ಬಾದಮಿ) : ಮಾನ್ಯ ವಸತಿ ಮತ್ತು ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಾದಾಮಿ ನಗರದ "ಮಕಾನ್"ದಲ್ಲಿ ಕುಡಿಯುವ ನೀರಿನ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ ಅದನ್ನು ಸರಿಪಡಿಸಲು ಸರ್ಕಾರದ ಮುಂದಿರುವ ಕ್ರಮಗಳೇನು?

ಶ್ರೀ ಕೆ.ಜೆ. ಜಾರ್ಜ್ (ವಸತಿ ಮತ್ತು ನಗರಾಭಿವೃದ್ಧಿ ಸಚಿವರು) :

ಅ) ಹೌದು.

ಆ) ಕೊಳವೆ ಬಾವಿಗಳನ್ನು ತೋಡಿ ಕಿರು ನೀರು ಸರಬರಾಜು ಯೋಜನೆಯಿಂದ ಕುಡಿಯುವ ನೀರನ್ನು ಒದಗಿಸುವ ವಿಷಯವನ್ನು ಪರಿಶೀಲಿಸಲಾಗುವುದು.

ಧಾರ್ಮಿಕ ದತ್ತಿ ಇಲಾಖೆಯಿಂದ ಕೊಡುವ ಧನ ಸಹಾಯದ ಬಗ್ಗೆ

1735 - ಶ್ರೀ ಎಂ.ಕೆ. ಪಟ್ಟಣ ಶೆಟ್ಟಿ (ಬಾದಾಮಿ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ತಿಳಿಸುವರೇ?